ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಂದಿರಾ ಕ್ಯಾಂಟೀನ್‌ಗಳ ಕುರಿತು

ಶ್ರೀ ಐವನ್ ಡಿ' ಸೋಜಾ(ನಾಮನಿರ್ದೇಶನ ಹೊಂದಿದವರು):-

501 (591) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಇಂದಿರಾ ಕ್ಯಾಂಟೀನ್‌ಗಳು ಕಾರ್ಯನಿರ್ವಹಿಸುತ್ತಿದೆ; ದಿನವೊಂದಕ್ಕೆ ಎಷ್ಟು ಮಂದಿ ಉಪಹಾರವನ್ನು ಸೇವಿಸುತ್ತಿದ್ದಾರೆ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಇಂದಿರಾ ಕ್ಯಾಂಟೀನ್ ಆಹಾರದ ಗುಣಮಟ್ಟವನ್ನು ಪರಿಶೀಲಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಮಂಗಳೂರು ನಗರದಲ್ಲಿ ಎಷ್ಟು ಇಂದಿರಾ ಕ್ಯಾಂಟೀನ್‌ಗಳು ಕಾರ್ಯನಿರ್ವಹಿಸುತ್ತಿದೆ ; ಎಷ್ಟು ಮಂದಿ ಉಪಹಾರ ಸೇವಿಸುತ್ತಾರೆ; (ವಿವರ ನೀಡುವುದು)

(ಈ) ಇಂದಿರಾ ಕ್ಯಾಂಟೀನ್‌ನಲ್ಲಿ ಕಾಫಿ/ಟೀ ನೀಡಬೇಕೆಂಬ ಬೇಡಿಕೆ ಇದ್ದು, ಎಷ್ಟು ಕಡೆ ಪೂರೈಸಲಾಗುತ್ತದೆ? (ವಿವರ ನೀಡುವುದು)